ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

ಭಾಗ್ಯಲಕ್ಷ್ಮಿ ಯೋಜನೆಯ ಅನುಷ್ಠಾನ ಕುರಿತು

ಶ್ರೀ ರಘುನಾಥ್‌ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):-

676 (783) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ಮೂರು ವರ್ಷಗಳಲ್ಲಿ ಬೀದರ್ ಜಿಲ್ಲೆಯಲ್ಲಿ ಎಷ್ಟು ಜನ ಫಲಾನುಭವಿಗಳಿಗೆ ಭಾಗ್ಯಲಕ್ಷ್ಮಿ ಯೋಜನೆಯ ಸೌಲಭ್ಯವನ್ನು ಸರ್ಕಾರ ಒದಗಿಸಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಯೋಜನೆಯ ಫಲಾನುಭವಿಗಳನ್ನು ಗುರುತಿಸಲು ನಿಗಧಿಪಡಿಸಿರುವ ನಿಯಮಗಳಲ್ಲಿ ಬದಲಾವಣೆ ಮಾಡಲಾಗಿದೆಯೇ ; (ವಿವರ ನೀಡುವುದು)

(ಇ) ಭಾಗ್ಯಲಕ್ಷ್ಮಿ ಯೋಜನೆ ಜಾರಿಗಾಗಿ ಮೂರು ವರ್ಷಗಳಲ್ಲಿ ಮೀಸಲಿಟ್ಟ ಮತ್ತು ವೆಚ್ಚ ಮಾಡಿದ ಮೊತ್ತ ಎಷ್ಟು ? (ಮಾಹಿತಿ ನೀಡುವುದು)